**Akashvani : Bangalore**
**Regional Bulletin In Kannada**
**06.12.2024 / 14.30 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರ ಸಾವಿನ ಪ್ರಕರಣ; ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸೂಚನೆ**

**೨. ಬಾಣಂತಿಯರ ಸಾವಿನ ಪ್ರಕರಣ; ಆರೋಗ್ಯ ಸಚಿವರ ರಾಜೀನಾಮೆಗೆ ಬಿಜೆಪಿ ಆಗ್ರಹ**

**೩. ಮಹಿಳಾ ಅಧಿಕಾರಿಗೆ ಬೆದರಿಕೆ; ಕಲಬುರಗಿ ಜೈಲಿನಿಂದ ಆರು ಕೈದಿಗಳ ಸ್ಥಳಾಂತರ**

**೪. ರಾಜ್ಯಾದ್ಯಂತ ಡಾ.ಬಾಬಾಸಾಹೇಬ್ ಅಂಬೇಡ್ಕರ್ ೬೮ನೇ ಮಹಾಪರಿನಿರ್ವಾಣ ದಿನ**

**<><*<><>*><>**

ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿನ ಬಾಣಂತಿಯರ ಸಾವು ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಪ್ರಕರಣದಲ್ಲಿ ತಮ್ಮ ತಪ್ಪಿದ್ದರೆ ರಾಜೀನಾಮೆ ನೀಡಲು ಸಿದ್ಧ ಎಂದು ಸ್ಪಷ್ಟಪಡಿಸಿದ್ದಾರೆ. ಔಷಧಿಗಳನ್ನು ಪೂರೈಸುವ ಕಂಪನಿಯ ಪಾತ್ರವು ಅನುಮಾನಾಸ್ಪದವಾಗಿದೆ ಎಂದು ತಿಳಿಸಿದ್ದಾರೆ. ಈ ವಿಚಾರದಲ್ಲಿ ಪ್ರತಿಪಕ್ಷಗಳ ಸಹಕಾರವೂ ನಮಗೆ ಅಗತ್ಯ ಎಂದ ಅವರು, ಇದು ಜೀವಕ್ಕೆ ಸಂಬಂಧಿಸಿದ ವಿಚಾರವಾಗಿದ್ದು ಇಂಥ ಪ್ರಕರಣಗಳಲ್ಲಿ ತಪ್ಪಿತಸ್ಥರಿಗೆ ಕ್ರಮ ಆಗಲೇಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.ವೈದ್ಯಕೀಯ ಸಚಿವ ಶರಣ್ ಪ್ರಕಾಶ್ ಪಾಟೀಲ್ ಪ್ರತಿಕ್ರಿಯಿಸಿ ಪರೀಕ್ಷೆಗಾಗಿ ಲ್ಯಾಬ್ ಗೆ ಮಾದರಿಯನ್ನು ಕಳುಹಿಸಲಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ರಕ್ತದೊತ್ತಡ, ಸಕ್ಕರೆ ಖಾಯಿಲೆ, ಜ್ವರಕ್ಕೆ ಮಾತ್ರೆಗಳೇ ಸಿಗುತ್ತಿಲ್ಲ. ಇನ್ನೊಂದೆಡೆ ಬಳ್ಳಾರಿಯಲ್ಲಿ ಬಾಣಂತಿಯರ ಸಾವುಗಳು ನಿಲ್ಲುತ್ತಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಟ್ವೀಟ್ ಮಾಡಿರುವ ಅವರು, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ರಾಜೀನಾಮೆಗೆ ಒತ್ತಾಯಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಈ ವರ್ಷ ಒಂದು ನೂರಕ್ಕೂ ಹೆಚ್ಚು ಬಾಣಂತಿಯರ ಸಾವು ಸಂಭವಿಸಿದ್ದು, ಈ ಬಗ್ಗೆ ಸಿಬಿಐ ತನಿಖೆಗೆ ಮಾಜಿ ಆರೋಗ್ಯ ಸಚಿವ ಬಿ.ಶ್ರೀರಾಮುಲು ಆಗ್ರಹಿಸಿದ್ದಾರೆ. ಬಳ್ಳಾರಿ ಜಿಲ್ಲಾ ಆಸ್ಪತ್ರೆಯ ಹೆರಿಗೆ ನಂತರದ ವಾರ್ಡಿಗೆ ಭೇಟಿ ನೀಡಿ ಮಾತನಾಡಿದ ಅವರು, ರಾಜ್ಯದ ವಿವಿಧೆಡೆ ಸುಮಾರು ನೂರಕ್ಕೂ ಹೆಚ್ಚು ಬಾಣಂತಿಯರು ಸಾವನ್ನಪ್ಪಿದ್ದಾರೆ ಎಂದು ಆರೋಪಿಸಿದ್ದಾರೆ. ಆದರೆ ರಾಜ್ಯದ ಆರೋಗ್ಯ ಸಚಿವ ದಿನೇಶ್ ಗುಂಡುರಾವ್ ಪರಿಶೀಲಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ತಕ್ಷಣವೇ ಆರೋಗ್ಯ ಸಚಿವರು ಎಲ್ಲಾ ಆಸ್ಪತ್ರೆಗಳಿಗೆ ಭೇಟಿ ನೀಡಬೇಕು. ಸಾವನ್ನಪ್ಪಿದವರಿಗೆ ಒಂದು ಕೋಟಿ ರೂಪಾಯಿ ಪರಿಹಾರ ನೀಡುವಂತೆ ಸರ್ಕಾರವನ್ನು ಒತ್ತಾಯಿಸಿದ್ದಾರೆ.

**<><*<><>*><>**

ಕಲಬುರಗಿ ಜಿಲ್ಲಾ ಕಾರಾಗೃಹದ ಅಧೀಕ್ಷಕಿ ಆರ್.ಅನಿತಾ ಅವರಿಗೆ ಬೆದರಿಕೆಯ ಆಡಿಯೊ ಸಂದೇಶದ ಹಿನ್ನೆಲೆಯಲ್ಲಿ ಭಯೋತ್ಪಾದಕ ಶಂಕಿತ ಆರು ಕೈದಿಗಳನ್ನು ರಾಜ್ಯದ ವಿವಿಧ ಜಿಲ್ಲೆಗಳಿಗೆ ಸ್ಥಳಾಂತರಿಸಲಾಗಿದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಅನಾಮಧೇಯ ವ್ಯಕ್ತಿಯೊಬ್ಬನಿಂದ ಸಂದೇಶ ಬಂದಿದ್ದು, ಕಾರನ್ನು ಸ್ಫೋಟಿಸುವ ಬೆದರಿಕೆ ಹಾಕಲಾಗಿತ್ತು. ನ್ಯಾಯಾಲಯದಿಂದ ಅನುಮತಿ ಪಡೆದು ಬೆಳಗಾವಿ, ಧಾರವಾಡ, ಶಿವಮೊಗ್ಗ, ಬಳ್ಳಾರಿ ಮತ್ತು ರಾಜ್ಯದ ಇತರ ಜಿಲ್ಲಾ ಕಾರಾಗೃಹಗಳಿಗೆ ಸ್ಥಳಾಂತರಿಸಲಾಗಿದೆ.

**<><*<><>*><>**

ದಾವಣಗೆರೆ ಜಿಲ್ಲೆ ಹರಿಹರ ತಾಲ್ಲೂಕಿನ ಕೊಂಡಜ್ಜಿ ಬಳಿ ರಂಗಾಯಣಕ್ಕೆ ೧೦ ಎಕರೆ ಜಮೀನು ಮೀಸಲಿಡಲಾಗಿದೆ. ಇಲ್ಲಿ ವೃತ್ತಿ ರಂಗಭೂಮಿಗೆ ಸಂಬಂಧಿಸಿದ ವಸ್ತು ಸಂಗ್ರಹಾಲಯ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ ಎಂದು ವೃತ್ತಿ ರಂಗಭೂಮಿ ರಂಗಾಯಣ ವಿಶೇಷಾಧಿಕಾರಿ ರವಿಚಂದ್ರ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ನಡೆದ ನಾಟಕ ಕಂಪನಿ ಮಾಲೀಕರ ಸಭೆಯಲ್ಲಿ ಮಾತನಾಡಿದ ಅವರು, ವೃತ್ತಿ ರಂಗಭೂಮಿಯನ್ನು ಪುನಶ್ಚೇತನಗೊಳಿಸುವ ಸಂಬಂಧ ಸಾಕಷ್ಟು ಚಿಂತನೆಗಳು ನಡೆದಿದ್ದು, ನಾಟಕ ಕಂಪನಿ ಮಾಲೀಕರ ಸಲಹೆಗಳನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ಹೇಳಿದ್ದಾರೆ. ರಂಗಾಯಣ ನಿರ್ದೇಶಕ ಮಲ್ಲಿಕಾರ್ಜುನ್ ಕಡಕೋಳ ಮಾತನಾಡಿ, ನವೆಂಬರ್ ಆರಂದು ಪ್ರತಿವರ್ಷ ವೃತ್ತಿ ರಂಗಭೂಮಿ ದಿನವನ್ನಾಗಿ ಸರ್ಕಾರ ಘೋಷಣೆ ಮಾಡಬೇಕು ಎಂದು ನಿರ್ಣಯ ಕೈಗೊಳ್ಳಲಾಗಿದೆ ಎಂದರು.

**<><*<><>*><>**

ರಾಜ್ಯಾದ್ಯಂತ ಇಂದು ಸಂವಿಧಾನ ಶಿಲ್ಪಿ, ಭಾರತರತ್ನ, ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಅವರ ೬೮ನೇ ಮಹಾ ಪರಿನಿರ್ವಾಣ ದಿನ ಆಚರಿಸಲಾಯಿತು. ಸಮಾಜ ಕಲ್ಯಾಣ ಇಲಾಖೆ ವತಿಯಿಂದ ವಿಧಾನಸೌಧದ ಆವರಣದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪುಷ್ಪಾರ್ಚನೆ ನೆರವೇರಿಸಿ, ಗೌರವ ನಮನ ಸಲ್ಲಿಸಿದರು. ಈ ವೇಳೆ ಮಾತನಾಡಿದ ಅವರು, ದೇಶದಲ್ಲಿ ಬಸವಣ್ಣ, ಬುದ್ಧನ ನಂತರ ಸಮಾನತೆಗಾಗಿ ಹೋರಾಡಿದವರು ಬಾಬಾ ಸಾಹೇಬ್ ಅಂಬೇಡ್ಕರ್ ಎಂದು ತಿಳಿಸಿದರು. ಜಗತ್ತಿನಲ್ಲಿಯೇ ಶ್ರೇಷ್ಠ ಸಂವಿಧಾನ ನೀಡಿದ ಮಹಾತ್ಮ ಎಂದು ಅಂಬೇಡ್ಕರ್ ಅವರನ್ನು ಬಣ್ಣಿಸಿದರು. ಮಾನವರು ಪರಸ್ಪರ ಪ್ರೀತಿಸಬೇಕೇ ಹೊರತು ದ್ವೇಷ ಸಲ್ಲದು ಎಂದು ಅಭಿಪ್ರಾಯಪಟ್ಟರು.

*****ಧ್ವನಿ *** ಮುಖ್ಯಮಂತ್ರಿ**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ಅಂಬೇಡ್ಕರ್ ಅವರ ಮಹಾ ಪರಿನಿಬ್ಬಾಣ ಅಂಗವಾಗಿ ಡಾ. ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಮಾಲಾರ್ಪಣೆ ಮಾಡಿ ಪುಷ್ಪನಮನ ಅರ್ಪಿಸಿದರು. ಅಂಬೇಡ್ಕರ್ ೬೮ನೇ ಪುಣ್ಯ ಸ್ಮರಣೆ ಯನ್ನು ಮಹಾ ಪರಿನಿರ್ವಾಣ ದಿನವನ್ನಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ಶಾಸಕ ಧೀರಜ್ ಮುನಿರಾಜು, ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಅಂಬೇಡ್ಕರ್ ಸಂವಿಧಾನದ ಮಹತ್ವ ಅರ್ಥ ಮಾಡಿಕೊಳ್ಳುವ ಮೂಲಕ ಅದರ ಆಶಯಗಳನ್ನು ಈಡೇರಿಸಬೇಕಿದೆ ಎಂದು ತಿಳಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಕಛೇರಿ ಸಭಾಂಗಣದಲ್ಲಿಂದು ನಡೆದ ಕಾರ್ಯಕ್ರಮದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಡಾ.ಎನ್. ಶಿವಶಂಕರ್ ಗೌರವ ನಮನ ಸಲ್ಲಿಸಿದರು. ಚಿತ್ರದುರ್ಗದಲ್ಲಿ ಜಿಲ್ಲಾಧಿಕಾರಿ ವೆಂಕಟೇಶ್, ಅಂಬೇಡ್ಕರ್ ಪುತ್ಥಳಿಗೆ ಪುಷ್ಪ ನಮನದ ಮೂಲಕ ಗೌರವ ಸಲ್ಲಿಸಿದರು. ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ೬೮ ನೇ ಮಹಾ ಪರಿನಿರ್ವಾಣ ದಿನಾಚರಣೆ ಅಂಗವಾಗಿ ದಾವಣಗೆರೆ ಜಿಲ್ಲಾಡಳಿತದಿಂದ ಗೌರವ ಸಲ್ಲಿಸಲಾಯಿತು. ಇದೇ ವೇಳೆ ನಗರದಲ್ಲಿರುವ ಎಲ್ಲ ಅಂಬೇಡ್ಕರ್ ಪ್ರತಿಮೆಗಳನ್ನು ಮಹಾನಗರ ಪಾಲಿಕೆಯಿಂದ ಸ್ವಚ್ಛಗೊಳಿಸಿ ಪುಷ್ಪ ನಮನ ಸಲ್ಲಿಸಲಾಯಿತು. ಹಾಸನ ಜಿಲ್ಲಾಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಅಂಬೇಡ್ಕರ್ ಪುಣ್ಯಸ್ಮರಣೆ ಕಾರ್ಯಕ್ರಮ ನಡೆಯಿತು.

**<><*<><>*><>**

ಉತ್ತರಕನ್ನಡ ಜಿಲ್ಲೆಯಲ್ಲಿ ಅತಿವೃಷ್ಟಿ, ಪ್ರವಾಹ, ನೆರೆ ಹಾವಳಿ, ಭೂ ಕುಸಿತ ಸಂದರ್ಭದಲ್ಲಿ ವಿಪತ್ತು ನಿರ್ವಹಣೆಗಾಗಿ ಹೆಚ್ಚಿನ ಹಣ ವ್ಯಯ ಮಾಡಬೇಕಾಗಿದೆ. ಈ ಹಿನ್ನೆಲೆಯಲ್ಲಿ ಹಣಕಾಸು ಹಂಚಿಕೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಸಲಹೆ ಪಡೆದು ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಾಗಿ ಐದನೇ ಹಣಕಾಸು ಆಯೋಗದ ಅಧ್ಯಕ್ಷ ನಾರಾಯಣಸ್ವಾಮಿ ತಿಳಿಸಿದ್ದಾರೆ. ಕಾರವಾರದಲ್ಲಿ ಸಭೆ ನಡೆಸಿದ ಅವರು, ೫ನೇ ಹಣಕಾಸು ಆಯೋಗದ ೨೦೨೪-೨೫ನೇ ಸಾಲಿನ ವರದಿ ಪ್ರತಿಯನ್ನು ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ, ಹಾಗೂ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಣಾಧಿಕಾರಿ ಈಶ್ವರ್ ಕಾಂದೂ ಅವರಿಗೆ ಹಸ್ತಾಂತರಿಸಿದರು.

**<><*<><>*><>**

ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ಇಂದಿನಿಂದ ಹಿರಿಯರ ರಾಷ್ಟ್ರೀಯ ಕುಸ್ತಿ ಚಾಂಪಿಯನ್‌ಶಿಪ್ ೨೦೨೪ ನಡೆಯಲಿದ್ದು, ಭಾರತದ ಅಗ್ರ ಕುಸ್ತಿಪಟುಗಳು ಭಾಗವಹಿಸಲಿದ್ದಾರೆ. ಒಟ್ಟು ೨೪ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಭಾಗವಹಿಸಲಿವೆ. ದೇಶಾದ್ಯಂತ ೭೦೦ ಕ್ಕೂ ಹೆಚ್ಚು ನೋಂದಣಿಗಳನ್ನು ಸ್ವೀಕರಿಸಲಾಗಿದೆ. ರಾಜ್ಯದ ೨೮ ಕುಸ್ತಿಪಟುಗಳು ವಿವಿಧ ವಿಭಾಗಗಳಲ್ಲಿ ಸ್ಪರ್ಧಿಸುವ ಮೂಲಕ ಹರಿಯಾಣ ಚಾಂಪಿಯನ್‌ಶಿಪ್‌ನಲ್ಲಿ ಪ್ರಾಬಲ್ಯ ಸಾಧಿಸಲು ಸಜ್ಜಾಗಿದೆ. ಆತಿಥೇಯ ಕರ್ನಾಟಕ ಕೂಡ ೩೨ ಕುಸ್ತಿಪಟುಗಳ ಬಲಿಷ್ಠ ತಂಡದೊಂದಿಗೆ ಸ್ಪರ್ಧಿಸುತ್ತಿದೆ. ಈ ವರ್ಷದ ಆರಂಭದಲ್ಲಿ ಜೋರ್ಡಾನ್‌ನಲ್ಲಿ ನಡೆದ ೨೩ ವಯೋಮಿತಿಯ ಏಷ್ಯನ್ ಚಾಂಪಿಯನ್‌ಶಿಪ್ ಚಿನ್ನವನ್ನು ಗೆದ್ದ ಮಣಿಪುರದ ವೈ ಮಿನಾಕ್ಷಿ ದೇವಿ ಕೂಡ ಕಣದಲ್ಲಿದ್ದಾರೆ.

**<><*<><>*><>**

**ಸಂಕ್ಷಿಪ್ತ ಸುದ್ದಿ...**

೧. ವಿಶೇಷ ಘಟಕ ಹಾಗೂ ಗಿರಿಜನ ಉಪಯೋಜನೆಯಡಿ ಮಂಜೂರಾದ ಅನುದಾನಕ್ಕೆ ತಕ್ಕಂತೆ ಭೌತಿಕ ಪ್ರಗತಿ ಸಾಧಿಸಲು ವಿಶೇಷ ಗಮನ ನೀಡುವಂತೆ ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

೨. ೧೯೭೧ರ ಯುದ್ಧದಲ್ಲಿ ಭಾರತವು ಪಾಕಿಸ್ತಾನ ವಿರುದ್ಧ ಸಾಧಿಸಿದ ಜಯವನ್ನು ಡಿಸೆಂಬರ್ ೧೬ರಂದು ವಿಜಯ ದಿವಸ ಕಾರ್ಯಕ್ರಮವನ್ನಾಗಿ ಆಚರಿಸಲಾಗುತ್ತಿದೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ತಿಳಿಸಿದ್ದಾರೆ.

೩. ಹಾವೇರಿ ಜಿಲ್ಲೆಯಲ್ಲಿ ಇದೇ ೧೪ರಂದು ರಾಷ್ಟ್ರೀಯ ಲೋಕ ಅದಾಲತ್ ಜರುಗಲಿದ್ದು, ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು ಹಾಗೂ ವ್ಯಾಜ್ಯಪೂರ್ವ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಬಹುದಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಕೆ.ಸಿ.ಸದಾನಂದಸ್ವಾಮಿ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**